# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2017–18ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ:2515–00–101–0–17 ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ (ಯೋಜನೇತರ) ರಡಿಯಲ್ಲಿ ಆಯವ್ಯಯದ ಪುನರ್ ವಿನಿಯೋಗ ಮಾಡುವ ಕುರಿತು.

ಓದಲಾಗಿದೆ,

ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ ರವರ ಪತ್ರ ಸಂಖ್ಯೆ:ರಾಚುಆ:22/ಲೆಕ್ಕ/2017–18, ದಿನಾಂಕ:30–01–2018.

**ಪ್ರಸ್ತಾವನೆ:**

ಮೇಲೆ ಓದಲಾದ ಪ್ರಸ್ತಾವನೆಯಲ್ಲಿ ಕಾರ್ಯದರ್ಶಿಗಳು, ರಾಜ್ಯ ಚುನಾವಣಾ ಆಯೋಗ ಇವರು 2017–18ನೇ ಸಾಲಿನಲ್ಲಿ ಚುನಾವಣಾ ಆಯೋಗದ ಪ್ರಧಾನ ಲೆಕ್ಕ ಶೀರ್ಷಿಕೆ ಯೋಜನೇತರ 2515–00–101–0–17 ರಡಿ ಉಪ ಲೆಕ್ಕ ಶೀರ್ಷಿಕೆ 071 ಕಟ್ಟಡ ವೆಚ್ಚಕ್ಕೆ ರೂ.37.00ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಬಿಡುಗಡೆಯಾಗಿರುವ ಅನುದಾನವು ಸೆಪ್ಟೆಂಬರ್ 2017ರ ಮಾಹೆಯವರೆಗೆ ಪೂರ್ಣಗೊಂಡಿರುತ್ತದೆ. ಬಾಡಿಗೆ ದರವು ಪರಿಷ್ಕೃತಗೊಂಡು ಹೆಚ್ಚಾಗಿರುವುದರಿಂದ ಅಕ್ಟೋಬರ್ 2017ರ ಮಾಹೆಯಿಂದ ಫೆಬ್ರವರಿ 2018ರ ಅಂತ್ಯಕ್ಕೆ ರೂ.14.19 ಲಕ್ಷ ಅನುದಾನವು ಅವಶ್ಯವಿರುತ್ತದೆ ಎಂದು ತಿಳಿಸಿರುತ್ತಾರೆ.

ಆದ್ದರಿಂದ ಉಪ ಲೆಕ್ಕ ಶೀರ್ಷಿಕೆ:195 ಸಾರಿಗೆ ವೆಚ್ಚದಲ್ಲಿ ಹೆಚ್ಚುವರಿಯಾಗಿ ಉಳಿದಿರುವ ರೂ.18.50 ಲಕ್ಷ ಅನುದಾನದಿಂದ ರೂ.14.19ಲಕ್ಷಗಳನ್ನು 071–ಕಟ್ಟಡ ವೆಚ್ಚಕ್ಕೆ ಪುನರ್ ವಿನಿಯೋಗ ಮಾಡಿಕೊಡಲು ನಿಗಧಿತ ನಮೂನೆಯಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಸದರಿ ಅನುದಾನವನ್ನು ಪುನರ್ ವಿನಿಯೋಗ ಮಾಡಿಕೊಡಬೇಕೆಂದು ಕೋರಿರುತ್ತಾರೆ.

ಈ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶ ನೀಡಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 58 ಜಿಪಸ 2018, ಬೆಂಗಳೂರು, ದಿನಾಂಕ:02–03–2018.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು, 2017–18ನೇ ಸಾಲಿನ ರಾಜ್ಯ ಚುನಾವಣಾ ಆಯೋಗದ ಪ್ರಧಾನ ಲೆಕ್ಕ ಶೀರ್ಷಿಕೆ ಯೋಜನೇತರ 2515–00–101–0–17ರಡಿ ಉಪ ಲೆಕ್ಕ ಶೀರ್ಷಿಕೆ:2515–00–101–17(195)ರಡಿ ಸಾರಿಗೆ ವೆಚ್ಚದಲ್ಲಿ ಹೆಚ್ಚುವರಿಯಾಗಿ ಉಳಿದಿರುವ ರೂ.18.50ಲಕ್ಷ ಅನುದಾನದಿಂದ ರೂ.14.19ಲಕ್ಷಗಳನ್ನು ಉಪ ಲೆಕ್ಕ ಶೀರ್ಷಿಕೆ:2515–00–101–0–17(071)ಗೆ ಕಟ್ಟಡ ವೆಚ್ಚಕ್ಕೆ ಅನುಬಂಧದಲ್ಲಿರುವಂತೆ ಮರು ಹೊಂದಾಣಿಕೆ ಮಾಡಿ ಆದೇಶಿಸಿದೆ.

ಸದರಿ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ:ಗ್ರಾಅಪ 65 ಪಿಬಿಎಸ್ 2018, ದಿನಾಂಕ:15–02–2018 ರಲ್ಲಿ ನೀಡಿರುವ ಸಹಮತಿ ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಆಇ 11 ಟಿಎಫ್‌ಪಿ 2007, ದಿನಾಂಕ:27–11–2007ರಲ್ಲಿ ಆಯಾಯಾ ಇಲಾಖಾ ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

P Devsahayam 2/3/2018

(ಪಿ.ದೇವಸಹಾಯಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

2. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.
3. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
4. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.
5. ವಿಶೇಷಾಧಿಕಾರಿ, ಆರ್ಥಿಕ ಇಲಾಖೆ (ವೆಚ್ಚ-6), ವಿಧಾನ ಸೌಧ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
7. ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
8. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ ಮಾಸ ಪತ್ರಿಕೆ – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.
9. ಶಾಖಾ ರಕ್ಷಾ ಕಡತಕ್ಕೆ/ಹೆಚ್ಚುವರಿ ಪ್ರತಿ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.